# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಚಿಕ್ಕಮಾದಿನಾಳ್ ಹಾಗೂ ಇತರೆ 11 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಅಪ/24/ಗ್ರಾನೀಸ(5)2010 ದಿನಾಂಕ:19.10.2010.
2. ದಿನಾಂಕ:29.09.2021ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಕುನೀ&ನೈಇ/ಮುಇ/ತಾಂತ್ರಿಕ/47/2021.

---

**ಪೀಠಿಕೆ:**

ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಚಿಕ್ಕಮಾದಿನಾಳ್ ಹಾಗೂ ಇತರೆ 11 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.9.35ಕೋಟಿಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೇಲೆ(2)ರಲ್ಲಿ ಓದಲಾದ ಸಭೆಯ ನಡವಳಿಯಲ್ಲಿ ಸದರಿ ಯೋಜನೆ ಕಾಮಗಾರಿಯ ಟೆಂಡರ್ ಐಟಂಗಳ ಪ್ರಮಾಣಗಳಿಗಿಂತ ಹೆಚ್ಚುವರಿ ಅನುಷ್ಠಾನ ಹಾಗೂ ಟೆಂಡರ್‌ನಲ್ಲಿ ಇಲ್ಲದಿರುವ ಹೊಸ ಐಟಂಗಳನ್ನು ಸೇರ್ಪಡೆಗೊಳಿಸಿ ಅನುಷ್ಠಾನಗೊಳಿಸಿರುವುದರಿಂದ ಅಂದಾಜು ಮೊತ್ತ **ರೂ.18.85ಕೋಟಿಗಳಿಗೆ** ಪರಿಷ್ಕೃತವಾಗಿರುತ್ತದೆ.

ಯೋಜನೆಯ ಅನುಷ್ಠಾನದಲ್ಲಿ ಕಚ್ಚಾ ನೀರು ಏರು ಕೊಳವೆ ಮಾರ್ಗ, ಇಂಪೌಂಡಿಂಗ್ ರಿಸರ್ ವಯರ್ (ಐಆರ್), Gravity Main from ZBR to OHT, O&M, Jack Well cum Pump & Pumping Machineries, P.S.G, Nala Diversion ಮತ್ತು Express Feeder Line ಕಾಮಗಾರಿಗಳ ಮೊತ್ತ ಅಂದಾಜು ಪಟ್ಟಿಯಲ್ಲಿ ಹೆಚ್ಚಳವಾಗಿರುವುದರಿಂದ ಯೋಜನೆಯ ಅಂದಾಜು ಮೊತ್ತ **ರೂ.18.85ಕೋಟಿಗಳಿಗೆ** ಪರಿಷ್ಕೃತಗೊಂಡಿರುತ್ತದೆ.

ದಿನಾಂಕ:29.09.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಟೆಂಡರ್ ಕಾಮಗಾರಿಗಳ Variation in tender items and in new items & EOT ಪ್ರಾಧಿಕಾರ ಸಭೆಯ ನಿರ್ಣಯದಂತೆ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಮೇಲೆ ಓದಲಾದ (3)ರ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಕೊಪ್ಪಳ** ಹಾಗೂ **ಮುಖ್ಯ ಅಭಿಯಂತರರು,** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/361/ಗ್ರಾನೀಸ(4)2022 ಬೆಂಗಳೂರು, ದಿನಾಂಕ:12.07.2022** 974

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಚಿಕ್ಕಮಾದಿನಾಳ್ ಹಾಗೂ ಇತರೆ 11 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಯ **ರೂ.18.85ಕೋಟಿ (ಹದಿನೆಂಟು ಕೋಟಿ ಎಂಭತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳ** ಪರಿಷ್ಕೃತ ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ 2215-ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ (2215-MVS) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಈ ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು (O&M) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗಳಿಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2022-23ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

ಈ) ಈ ಯೋಜನೆಗಳ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಗಳ ಕಾರ್ಯಕ್ಷಮತೆ / ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ / ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಊ) ಯೋಜನೆಗಳು ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

ಋ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. **ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 46 ವೆಚ್ಚ–6/2022 ದಿನಾಂಕ:25.04.2022ರ ಸಹಮತಿಯನ್ವಯ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/7/22

ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಕೊಪ್ಪಳ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಕೊಪ್ಪಳ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಕೊಪ್ಪಳ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
16. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.